ಕಾರ್ಮಿಕರ ನಿಷೇಧಕಾನೂನು ನಿಯಮಗಳನ್ನು ತಕ್ಷಣಕ್ಕೆ ಕಟ್ಟು ನಿಟ್ಟಾಗಿ ಜಾರಿಗೊಳಿಸದೇ ತೀವ್ರ ಪರಿಶೀಲನಾ ಕೆಲಸವನ್ನು ಮಾಡಿ ಅಪಾಯಕಾರಿ ವಲಯಗಳಲ್ಲಿ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವವರ ವಿರುದ್ಧವಾಗಿ ಆಡಳಿತವರ್ಗದವರಲ್ಲಿ ಜಾಗೃತಿಯನ್ನು ಉಂಟು ಮಾಡಲು ಪ್ರಯತ್ನಿಸಲಾಗುತ್ತದೆ.

ಕೃಷಿ ಮಾರುಕಟ್ಟೆ ಸಮಿತಿಗಳ ಚುನಾವಣೆ

1337 - ಶ್ರೀ ವಿ. ಮುನಿಯಪ್ಪ (ಶಿಡ್ಲಘಟ್ಟ) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷಿ ಮಾರುಕಟ್ಟೆ ಸಮಿತಿಗಳಿಗೆ ಕಳೆದ 5 ವರ್ಷಗಳಿಂದ ಚುನಾವಣೆಗಳನ್ನು ನಡೆಸದೆ ಆಡಳಿತಾಧಿಕಾರಿಗಳ ಕೈಯಲ್ಲಿ ಅಧಿಕಾರವನ್ನು ನೀಡಿರುವುದು ನಿಜವೇ.

ಆ) ಸ್ಥಳೀಯ ಸಂಸ್ಥೆಗಳಿಗೆ ಅವಧಿ ಮುಗಿಯುವುದಕ್ಕೆ ಮೊದಲೇ ಚುನಾವಣೆಗಳನ್ನು ನಡೆಸಬೇಕೆಂಬ ನಿಯಮಕ್ಕೆ ಇದು ವಿರುದ್ಧವಾಗಿರುವುದು ನಿಜವಲ್ಲವೇ,

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳು ಯಾವುದು?

ಶ್ರೀ ಬಿ.ಬಿ. ನಿಂಗಯ್ಯ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

ಅ) ಹೌದು.

ಆ) ಕರ್ನಾಟಕ ಕೃಷಿ ಉತ್ಪನ್ನ ಮಾರಾಟ(ನಿ) ಕಾಯಿದೆ 1966ರ ಪ್ರಕರಣ 38(1)ಕ್ಕೆ 1991ರ ಕರ್ನಾಟಕ ಕಾಯಿದೆ ಸಂಖ್ಯೆ 16ರ ಮೂಲಕ ತಿದ್ದುಪಡಿ ಮಾಡಿ ಸಮಿತಿಗಳ ಅವಧಿ ಮುಗಿಯುವುದಕ್ಕೆ ಮುಂಚೆ ಚುನಾವಣೆ ನಡೆಸಬೇಕೆಂದು 1-8-1991ರಂದು ಜಾರಿಗೆ ಬರುವಂತೆ ತಿದ್ದುಪಡಿ ಮಾಡಿದ್ದು, ಆಡಳಿತಾಧಿಕಾರಿಗಳು ಇದಕ್ಕೆ ಮುಂಚೆಯೇ ಏಪ್ರಿಲ್ 1989ರಿಂದ ಕಾರ್ಯನಿರ್ವಹಿಸುತ್ತಿದ್ದಾರೆ. 1995ರ ಡಿಸೆಂಬರ್ ಒಳಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಚುನಾವಣೆ ನಡೆಸಬೇಕೆಂದು ಸರ್ಕಾರ ಕೃಷಿ ಮಾರಾಟ ನಿರ್ದೇಶಕರಿಗೆ ಆದೇಶ ನೀಡಿದೆ.

ಕರ್ನಾಟಕ ಅಗ್ರೋ ಪ್ರೋಟೀನ್ಸ್ ಲಿಮಿಟೆಡ್‌ನ ನೌಕರರ ಬಗ್ಗೆ

1283 - ಶ್ರೀ ವಿ. ಮುನಿಯಪ್ಪ (ಶಿಡ್ಲಘಟ್ಟ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಅಗ್ರೋ ಪ್ರೋಟೀನ್ಸ್ ಲಿಮಿಟೆಡ್‌ನ ಈ ಹಿಂದಿನ 41 ಮಂದಿ ನೌಕರರ ಸೇವೆಯನ್ನು ಕೃಷಿ ಇಲಾಖೆಯಲ್ಲಿ ವಿಲೀನಗೊಳಿಸಲು 1992ನೇ ವರ್ಷದಲ್ಲಿ ತೀರ್ಮಾನ ತೆಗೆದುಕೊಂಡಿರುವುದು ಸಂಗತಿಯಾಗಿರುವುದಿಲ್ಲವೇ?

ಆ) ಈ ಸಂಬಂಧ ಅತಿಯಾದ ವಿಳಂಬವಾಗಿರುವುದು ಹಾಗೂ ಬಡ ನೌಕರರಿಗೆ ಇದರಿಂದಾಗಿ ಹೆಚ್ಚಿನ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) *ಹಾಗಾದರೆ, ಸರ್ಕಾರವು ಈ ನೌಕರರನ್ನು ಕೃಷಿ ಇಲಾಖೆಯಲ್ಲಿ ವಿಲೀನಗೊಳಿಸಲು ಕೂಡಲೇ ಕ್ರಮ ತೆಗೆದುಕೊಳ್ಳುವುದೇ ಹಾಗೂ ಅವರ ವೇತನವನ್ನು ಪಾವತಿಸುವುದೇ?*

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು):

ಅ) ಹೌದು.

ಆ) ಕರ್ನಾಟಕ ಅಗ್ರೋ ಪ್ರೋಟೀನ್ಸ್ ಕಂಪನಿಯ ನೌಕರರ ಕಷ್ಟಗಳು ಸರ್ಕಾರಕ್ಕೆ ತಿಳಿದಿದೆ ಮತ್ತು ಈ ಬಗ್ಗೆ ಸದರಿ ನೌಕರರನ್ನು ಕೃಷಿ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಸ್ತಾಪವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) ಸದರಿ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ತುಮಕೂರು ತಾಲ್ಲೂಕಿನಲ್ಲಿ ಗ್ರಾಮೀಣ ಪ್ರದೇಶಗಳಿಗೆ ಬಸ್ಸು ಸೌಕರ್ಯ

840 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಣಿಗಲ್ ಮತ್ತು ತುಮಕೂರು ತಾಲ್ಲೂಕುಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಬಸ್ಸು ಸಂಚಾರವಿಲ್ಲದೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೂಡಲೇ ಕ್ರಮ ಕೈಗೊಳ್ಳುವರೇ?*

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು) :

ಅ) ಇಲ್ಲಾ.

ಆ) ಉದ್ಭವಿಸುವುದಿಲ್ಲ.

ಖಾಸಗಿ ಬಸ್ಸುಗಳಿಗೆ ರಹದಾರಿ

1271 - ಶ್ರೀ ಹೆಚ್.ಎಸ್. ಶಂಕರಲಿಂಗೇ[illegible] (ಚಾಮರಾಜ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) *ಕರ್ನಾಟಕ ರಾಜ್ಯ ವಾಹನ ಕಾಯ್ದೆಯಲ್ಲಿ ಖಾಸಗಿ ಬಸ್ಸುಗಳಿಗೆ ವಿಶೇಷ ರಹದಾರಿ ನೀಡಲು ಅವಕಾಶವಿದೆಯೇ?*

ಆ) *ಹಾಗಿದ್ದಲ್ಲಿ ಇದರಿಂದ ಬರುವ ವರ್ಷಂಪ್ರತಿ ಕಂದಾಯ ಎಷ್ಟು?*

ಇ) *ಅಕ್ಕಪಕ್ಕದ ರಾಜ್ಯಗಳಲ್ಲಿ ಖಾಸಗಿ ಬಸ್ಸುಗಳಿಗೆ ವಿಶೇಷ ರಹದಾರಿ ನೀಡಲು ಅವಕಾಶ ಇದೆಯೇ?*